ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: www.kptcl.com
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521

**(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009)**

**ವಿಷಯ:** 80 ವರ್ಷಗಳು ಮತ್ತು ಅದಕ್ಕೂ ಮೇಲ್ಪಟ್ಟ ನಿಗಮದ ಎಲ್ಲಾ ಪಿಂಚಣಿದಾರರು/ಕುಟುಂಬ ಪಿಂಚಣಿದಾರರಿಗೆ ಹೆಚ್ಚುವರಿ ಪಿಂಚಣಿ ಮಂಜೂರು ಮಾಡುವ ಬಗ್ಗೆ.

***

**ಓದಲಾಗಿದೆ:-**

1. ದಿನಾಂಕ: 01.07.1993 ಕ್ಕಿಂತ ಮುಂಚಿತವಾಗಿ ನಿವೃತ್ತರಾದ ಅಥವಾ ಸೇವೆಯಲ್ಲಿರುವಾಗಲೇ ಮೃತರಾದ ನೌಕರರ ಪ್ರಕರಣಗಳಲ್ಲಿ ದಿನಾಂಕ: 01.04.2006 ರಿಂದ ಜಾರಿಗೆ ಬರುವಂತೆ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನವನ್ನು ಹೆಚ್ಚಿಸಿ ಹೊರಡಿಸಿದ ಸರ್ಕಾರಿ ಆದೇಶ ಸಂಖ್ಯೆ: ಆಇ(ವಿಶೇಷ) 27 ಪಿಇಎನ್ 2007 ದಿನಾಂಕ: 13.10.2010.
2. ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/18239/2010-11, ದಿನಾಂಕ: 12.05.2011.
3. ಪರಿಷ್ಕೃತ ವೇತನ ಮತ್ತು ಇತ್ಯಾದಿ ವಿಷಯಗಳ ಬಗ್ಗೆ ದಿನಾಂಕ: 02.03.2018 ರಂದು ಕವಿಪ್ರನಿ ನೌಕರರ ಸಂಘ(ನೋಂ.ಸಂ.659) ಮತ್ತು ನಿಗಮದ ಆಡಳಿತ ವರ್ಗದ ನಡುವೆ ಆದ ಒಪ್ಪಂದ.
4. ಪರಿಷ್ಕೃತ ವೇತನ ಮತ್ತು ಇತ್ಯಾದಿ ವಿಷಯಗಳ ಬಗ್ಗೆ ದಿನಾಂಕ: 01.04.2017 ರಿಂದ ಜಾರಿಗೆ ಬರುವಂತೆ ನಿಗಮದ ನೌಕರರಿಗೆ ಮತ್ತು ಅಧಿಕಾರಿಗಳಿಗೆ ಸಂಬಂಧಪಟ್ಟಂತೆ ಹೊರಡಿಸಲಾದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/69516/2017-18 ದಿನಾಂಕ: 09.03.2018 ಮತ್ತು ಕವಿಪ್ರನಿನಿ/ಬಿ16/69517/2017-18 ದಿನಾಂಕ: 09.03.2018.
5. ದಿನಾಂಕ: 01.04.2017 ರಿಂದ ಅನ್ವಯವಾಗುವಂತೆ ನಿವೃತ್ತಿ ವೇತನದಾರರಿಗೆ/ಕುಟುಂಬ ನಿವೃತ್ತಿ ವೇತನದಾರರಿಗೆ ಪಿಂಚಣಿಯನ್ನು ಪರಿಷ್ಕರಣೆ ಮಾಡಿ ಹೊರಡಿಸಿರುವ ನಿಗಮದ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/69518/ 2017-18, ದಿನಾಂಕ: 09.03.2018 ಮತ್ತು ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/69518/2017-18, ದಿನಾಂಕ: 29.06.2018.
6. 80 ವರ್ಷಗಳು ಮತ್ತು ಅದಕ್ಕೂ ಮೇಲ್ಪಟ್ಟ ಎಲ್ಲಾ ರಾಜ್ಯ ಸರ್ಕಾರಿ ಪಿಂಚಣಿದಾರರು/ಕುಟುಂಬ ಪಿಂಚಣಿದಾರರಿಗೆ ಹೆಚ್ಚುವರಿ ಪಿಂಚಣಿ ಮಂಜೂರು ಮಾಡುವ ಬಗ್ಗೆ ಹೊರಡಿಸಿದ ಸರ್ಕಾರಿ ಆದೇಶ ಸಂಖ್ಯೆ: ಆಇ(ವಿಶೇಷ) 120 ಪಿಇಎನ್ 2018 ದಿನಾಂಕ: 11.01.2019.
7. ನಿಗಮ ಕಾರ್ಯಾಲಯದ ಟಿಪ್ಪಣಿ ದಿನಾಂಕ: 08.04.2019.

**ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/86460/2018-19, ಬೆಂಗಳೂರು, ದಿನಾಂಕ:** 12 APR 2019

80 ವರ್ಷಗಳು ಮತ್ತು ಅದಕ್ಕೂ ಮೇಲ್ಪಟ್ಟ ನಿಗಮದ ಎಲ್ಲಾ ಪಿಂಚಣಿದಾರರು/ಕುಟುಂಬ ಪಿಂಚಣಿದಾರರುಗಳಿಗೆ ದಿನಾಂಕ: 01.01.2019 ರಿಂದ ಜಾರಿಗೆ ಬರುವಂತೆ ಹೆಚ್ಚುವರಿ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನವನ್ನು ಮಂಜೂರು ಮಾಡಲು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತವು ಹರ್ಷಿಸುತ್ತದೆ.

ಪಿಂಚಣಿದಾರರು/ಕುಟುಂಬ ಪಿಂಚಣಿದಾರರು ಯಾವಾಗ 80 ವರ್ಷ ಮತ್ತು ಅದಕ್ಕೂ ಮೇಲ್ಪಟ್ಟ ವಯೋಮಾನವನ್ನು ಪೂರ್ಣಗೊಳಿಸುತ್ತಾರೋ ಅಂದಿನಿಂದ, ಹೆಚ್ಚುವರಿ ಪಿಂಚಣಿಯ ಮೊತ್ತವನ್ನು ಈ ಕೆಳಗಿನ ದರಗಳಲ್ಲಿ ಪಾವತಿಸತಕ್ಕದ್ದು:-

| ಕ್ರ. ಸಂ. | ದಿನಾಂಕ 01.01.2019 ರಂದು ಪಿಂಚಣಿದಾರರ/ ಕುಟುಂಬ ಪಿಂಚಣಿದಾರರ ವಯಸ್ಸು | ದಿನಾಂಕ 01.01.2019 ರಿಂದ ಹೆಚ್ಚುವರಿ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನ |
|---|---|---|
| 1. | 80 ರಿಂದ 85 ವರ್ಷ ವಯಸ್ಸಿನ ಒಳಗಿನವರಿಗೆ | ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಶೇಕಡ 20 ರಷ್ಟು |
| 2. | 85 ರಿಂದ 90 ವರ್ಷ ವಯಸ್ಸಿನ ಒಳಗಿನವರಿಗೆ | ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಶೇಕಡ 30 ರಷ್ಟು |
| 3. | 90 ರಿಂದ 95 ವರ್ಷ ವಯಸ್ಸಿನ ಒಳಗಿನವರಿಗೆ | ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಶೇಕಡ 40 ರಷ್ಟು |
| 4. | 95 ರಿಂದ 100 ವರ್ಷ ವಯಸ್ಸಿನ ಒಳಗಿನವರಿಗೆ | ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಶೇಕಡ 50 ರಷ್ಟು |
| 5. | 100 ವರ್ಷಗಳ ಮೇಲ್ಪಟ್ಟವರಿಗೆ | ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಶೇಕಡ 100 ರಷ್ಟು |

ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನವನ್ನು ಹೆಚ್ಚಿಸಿ ಮಂಜೂರು ಮಾಡಿರುವುದು ಈ ಕೆಳಗಿನ ಷರತ್ತುಗಳಿಗೆ ಒಳಪಟ್ಟಿರುತ್ತದೆ:-

i) ಪಿಂಚಣಿದಾರರು/ಕುಟುಂಬ ಪಿಂಚಣಿದಾರರು 80 ವರ್ಷ ಅಥವಾ ಅದಕ್ಕೂ ಮೇಲ್ಪಟ್ಟ ವಯೋಮಾನವನ್ನು ಯಾವಾಗ ಪೂರ್ಣಗೊಳಿಸುತ್ತಾರೋ ಅಂದಿನಿಂದ, ಮೇಲೆ ತಿಳಿಸಿರುವ ಹೆಚ್ಚುವರಿ ಪಿಂಚಣಿಯ ಮೊತ್ತವನ್ನು ಪಡೆಯಲು ಅರ್ಹರಿರುತ್ತಾರೆ. ಪಿಂಚಣಿದಾರರು/ಕುಟುಂಬ ಪಿಂಚಣಿದಾರರು ಯಾವ ತಿಂಗಳಿನಲ್ಲಿ 80, 85, 90, 95 ಮತ್ತು 100 ವರ್ಷಗಳ ವಯಸ್ಸನ್ನು ಪೂರ್ಣಗೊಳಿಸುತ್ತಾರೋ, ಆ ತಿಂಗಳಿನಿಂದ ಈ ಮೇಲೆ ನಮೂದಿಸಿರುವ ದರಗಳಲ್ಲಿ ಹೆಚ್ಚುವರಿ ಪಿಂಚಣಿ/ಕುಟುಂಬ ಪಿಂಚಣಿಯು ಲಭ್ಯವಾಗತಕ್ಕದ್ದು.

ii) ಈ ಆದೇಶ ಹೊರಡಿಸಿದ ದಿನಾಂಕದಂದು ಅಥವಾ ಜನವರಿ 2019 ನೇ ತಿಂಗಳಿನಲ್ಲಿ 80 ವರ್ಷಗಳು ಹಾಗೂ ಅದಕ್ಕೂ ಹೆಚ್ಚಿನ ವಯಸ್ಸನ್ನು ಪೂರೈಸುವ ಪಿಂಚಣಿದಾರರು/ಕುಟುಂಬ ಪಿಂಚಣಿದಾರರ ಪ್ರಕರಣಗಳಲ್ಲಿ, ಹೆಚ್ಚುವರಿ ಪಿಂಚಣಿ/ಕುಟುಂಬ ಪಿಂಚಣಿಯನ್ನು, ದಿನಾಂಕ: 01.01.2019 ರಂದು ಅವರು ಪಡೆಯುತ್ತಿದ್ದ ಮೂಲ ನಿವೃತ್ತಿ ವೇತನದ ಮೇಲೆ ಲೆಕ್ಕ ಹಾಕತಕ್ಕದ್ದು.

iii) ಇತರೆ ಪ್ರಕರಣಗಳಲ್ಲಿ ಹೆಚ್ಚುವರಿ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನವನ್ನು ಪಿಂಚಣಿದಾರರು/ಕುಟುಂಬ ಪಿಂಚಣಿದಾರರು 80 ವರ್ಷಗಳು ಮತ್ತು ಅದಕ್ಕೂ ಮೇಲ್ಪಟ್ಟು ವಯಸ್ಸನ್ನು ಪೂರ್ಣಗೊಳಿಸಿದ ದಿನಾಂಕದಂದು ಪಡೆಯುತ್ತಿರುವ ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಆಧಾರದ ಮೇಲೆ ಲೆಕ್ಕ ಹಾಕತಕ್ಕದ್ದು.

iv) ಈ ಆದೇಶದನ್ವಯ ಮಂಜೂರು ಮಾಡಲಾಗುವ ಹೆಚ್ಚುವರಿ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನವನ್ನು ಲೆಕ್ಕಾಚಾರ ಮಾಡಲು ಮೂಲ ನಿವೃತ್ತಿ ವೇತನ/ಮೂಲ ಕುಟುಂಬ ನಿವೃತ್ತಿ ವೇತನವನ್ನು ಮಾತ್ರ ಪರಿಗಣನೆಗೆ ತೆಗೆದುಕೊಳ್ಳತಕ್ಕದ್ದು. ಪರಂತು, ಈ ಆದೇಶದನ್ವಯ ಮಂಜೂರು ಮಾಡಲಾದ ಹೆಚ್ಚುವರಿ ಪಿಂಚಣಿಯನ್ನು ಲೆಕ್ಕಾಚಾರಕ್ಕೆ ಪರಿಗಣಿಸುವಂತಿಲ್ಲ.

v) ಹೆಚ್ಚುವರಿ ನಿವೃತ್ತಿ ವೇತನದ ಮೊತ್ತವನ್ನು, ಪಿಂಚಣಿಯ ಪ್ರತ್ಯೇಕ ಭಾಗವಾಗಿ (distinct element) ನಮೂದಿಸತಕ್ಕದ್ದು ಹಾಗೂ ಅದನ್ನು ತುಟ್ಟಿಭತ್ಯೆಯ ಲೆಕ್ಕಾಚಾರಕ್ಕೆ ಪರಿಗಣಿಸತಕ್ಕದ್ದು. ಅದರಂತೆ, ಇನ್ನು ಮುಂದೆ ನಿವೃತ್ತಿ ವೇತನ ಬಟವಾಡೆ ಅಧಿಕಾರಿಗಳು/ಪಾವತಿಸುವ ಬ್ಯಾಂಕುಗಳು ಪಿ.ಪಿ.ಓ. ದಲ್ಲಿ ಕಾಲಕಾಲಕ್ಕೆ ಹೆಚ್ಚುವರಿ ಪಿಂಚಣಿಯನ್ನು ನಮೂದಿಸಲು ಕ್ರಮ ವಹಿಸುವುದು.

vi) ಈ ಆದೇಶದನ್ವಯ ಮಂಜೂರು ಮಾಡಲಾದ ಹೆಚ್ಚುವರಿ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನವನ್ನು ಪಿಂಚಣಿಯ ಪರಿವರ್ತನೆಗೆ (ಕಮ್ಯುಟೇಷನ್) ಮತ್ತು ಇತರೆ ನಿವೃತ್ತಿ ಸೌಲಭ್ಯದ ಉದ್ದೇಶಗಳಿಗೆ ಪರಿಗಣಿಸಲು ಅವಕಾಶವಿರುವುದಿಲ್ಲ.

vii) ಸಕ್ಷಮ ಪ್ರಾಧಿಕಾರದಿಂದ ಸೂಕ್ತ ಅನುಮೋದನೆ/ಆದೇಶ ಪಡೆದ ನಂತರ, ಪಿಂಚಣಿ ಪಾವತಿ ಪ್ರಾಧಿಕಾರಿಗಳಾದ ನಿವೃತ್ತಿ ವೇತನ ಬಟವಾಡೆ ಅಧಿಕಾರಿ/ಬ್ಯಾಂಕುಗಳು ಹೆಚ್ಚುವರಿ ಪಿಂಚಣಿ/ಕುಟುಂಬ ಪಿಂಚಣಿಯನ್ನು ಅರ್ಹ ನಿವೃತ್ತಿ ವೇತನ/ ಕುಟುಂಬ ನಿವೃತ್ತಿ ವೇತನದಾರರಿಗೆ ಪಾವತಿಸಲು ಕ್ರಮ ವಹಿಸುವುದು.

viii) ಹೆಚ್ಚುವರಿ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನವನ್ನು ಲೆಕ್ಕಾಚಾರ ಮಾಡುವ ಉದ್ದೇಶಕ್ಕಾಗಿ, ಪಿ.ಪಿ.ಓ. ಗಳಲ್ಲಿ ನಮೂದಿಸಿರುವ ಜನ್ಮ ದಿನಾಂಕದ ಆಧಾರದ ಮೇಲೆ ನಿವೃತ್ತಿ ವೇತನದಾರರ ವಯಸ್ಸನ್ನು ಲೆಕ್ಕಹಾಕತಕ್ಕದ್ದು.

ix) ಪಿ.ಪಿ.ಓ. ನಲ್ಲಿ ಜನ್ಮ ದಿನಾಂಕವನ್ನು ನಮೂದಿಸದೇ ಇರುವ ಪ್ರಕರಣಗಳಲ್ಲಿ, ಪಿಂಚಣಿ ಮಂಜೂರಾತಿ ಪ್ರಾಧಿಕಾರವು ಪಿಂಚಣಿದಾರನ/ಕುಟುಂಬ ಪಿಂಚಣಿದಾರನ ಜನ್ಮ ದಿನಾಂಕವನ್ನು ಮತ್ತು ವಯಸ್ಸನ್ನು, ನಿಗಮದ ದಿನಾಂಕ: 12.05.2011 ರ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ16/18239/2010-11 ರ ಷರತ್ತುಗಳ ಕಂಡಿಕೆ-9 ರಲ್ಲಿನ ಮಾರ್ಗಸೂಚಿಗಳಂತೆ ಪರಿಗಣಿಸಿ ನಿರ್ಧರಿಸತಕ್ಕದ್ದು.

x) ಹೆಚ್ಚುವರಿ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನವನ್ನು ಮಂಜೂರು ಮಾಡಿದ ನಂತರದಲ್ಲಿ ಪಿಂಚಣಿ ವ್ಯತ್ಯಾಸದ ಬಾಕಿ ಮೊತ್ತವನ್ನು ನಗದಾಗಿ ಪಾವತಿಸತಕ್ಕದ್ದು ಮತ್ತು ಅದನ್ನು ಪಿಂಚಣಿದಾರರ/ಕುಟುಂಬ ಪಿಂಚಣಿದಾರರ ಬ್ಯಾಂಕ್ ಖಾತೆಗೆ ಜಮಾ ಮಾಡತಕ್ಕದ್ದು.

xi) ಈ ಆದೇಶದಿಂದಾಗಿ ಪಾವತಿಸಬೇಕಾದ ಹೆಚ್ಚುವರಿ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನ ಮೊತ್ತದಲ್ಲಿ 50 ಪೈಸೆ ಮತ್ತು ಅದಕ್ಕಿಂತ ಹೆಚ್ಚಿನ ಭಿನ್ನಾಂಶಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು 50 ಪೈಸೆಗಿಂತ ಕಡಿಮೆ ಇರುವ ಭಿನ್ನಾಂಶವನ್ನು ಕಡೆಗಣಿಸತಕ್ಕದ್ದು.

xii) ಈ ಆದೇಶವನ್ನು ಜಾರಿಗೊಳಿಸುವಲ್ಲಿ ಯಾವುದೇ ತೊಂದರೆಗಳು ಉದ್ಭವಿಸಿದಲ್ಲಿ, ಅದನ್ನು ಪರಿಶೀಲಿಸಲು ಮತ್ತು ಅಗತ್ಯ ಕ್ರಮ ಕೈಗೊಳ್ಳಲು ಆರ್ಥಿಕ ಸಲಹೆಗಾರರು (ಎನ್.ಡಿ.ಸಿ.ಪಿ.ಎಸ್), ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು ರವರಿಂದ ಸ್ಪಷ್ಟೀಕರಣವನ್ನು ಪಡೆಯುವುದು.

'ಮಾನ್ಯ ವ್ಯವಸ್ಥಾಪಕ ನಿರ್ದೇಶಕರ ಅನುಮೋದನೆ ಮೇರೆಗೆ ಹಾಗೂ
ನಿಗಮದ ನಿರ್ದೇಶಕರುಗಳ ಸಭೆಯ ಅನುಸಮರ್ಥನೆಗೊಳಪಟ್ಟಿರುತ್ತದೆ

Gopal
ನಿರ್ದೇಶಕರು,
(ಆಡಳಿತ ಮತ್ತು ಮಾನವ ಸಂಪನ್ಮೂಲ)

ಗೆ:

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಜೆಸ್ಕಾಂ/ಹೆಸ್ಕಾಂ/ಮೆಸ್ಕಾಂ/ಸೆಸ್ಕ್/ಪಿ.ಸಿ.ಕೆ.ಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂಗಳು.
3. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂಗಳು.
4. ಎಲ್ಲಾ ಮುಖ್ಯ ಇಂಜನಿಯರ್(ವಿ), ಕವಿಪ್ರನಿನಿ/ಎಸ್ಕಾಂಗಳು.
5. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು (ಪ್ರಸರಣ)/ನಿರ್ದೇಶಕರು (ಹಣಕಾಸು)/ ನಿರ್ದೇಶಕರು (ಆಡಳಿತ ಮತ್ತು ಮಾನವ ಸಂಪನ್ಮೂಲ), ಕವಿಪ್ರನಿನಿ.

www.kptcl.com/eprasarana for information of:

6. ಎಲ್ಲಾ ಅಧೀಕ್ಷಕ ಇಂಜನಿಯರ್ (ವಿ)/ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
7. ಎಲ್ಲಾ ಕಾರ್ಯನಿರ್ವಾಹಕ ಇಂಜನಿಯರ್(ವಿ)/ಉಪ ಲೆಕ್ಕ ನಿಯಂತ್ರಣಾಧಿಕಾರಿಗಳು, ಕವಿಪ್ರನಿನಿ/ಎಸ್ಕಾಂಗಳು.
8. ಎಲ್ಲಾ ಅಧಿಕಾರಿಗಳು, ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:-

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ (ನೋಂದಣಿ ಸಂಖ್ಯೆ: 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ.ಎ.ಎನ್.ಜಯರಾಜ್, ಅಧ್ಯಕ್ಷರು, ಕವಿಮಂ ಇಂಜನಿಯರ್‌ಗಳ ಸಂಘ, ಬೆಂಗಳೂರು, ಮತ್ತು ನಿರ್ದೇಶಕರ, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ (ನೋಂದಣಿ ಸಂಖ್ಯೆ: 659), ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜನಿಯರ್‌ಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ(ರಿ), ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮಾ ಇಂಜನಿಯರ್‌ಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಪಿಂಚಣಿದಾರರ ಸಂಘ, ಕಾವೇರಿ ಭವನ ಬೆಂಗಳೂರು.